# ಬೆಂಗಳೂರು ವಿಶ್ವವಿದ್ಯಾಲಯ

NAAC Accreditation "A" GRADE

ಜ್ಞಾನಭಾರತಿ ಆವರಣ, ಬೆಂಗಳೂರು-56

**ಪ್ರಸ್ಥಾವನೆ:**

ಬೆಂಗಳೂರು ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳಲ್ಲಿ ಸ್ನಾತಕ ಪದವಿ ಕೋರ್ಸುಗಳಲ್ಲಿ ಪ್ರವೇಶ ಪಡೆದ ಅನೇಕ ವಿದ್ಯಾರ್ಥಿಗಳು ವ್ಯಾಸಂಗವನ್ನು ಮಧ್ಯದಲ್ಲಿ ಮೊಟಕುಗೊಳಿಸಿ ನಂತರ ವಿಶ್ವವಿದ್ಯಾಲಯದ ಅನುಮತಿ ಇಲ್ಲದೇ ಪರೀಕ್ಷೆಗಳಿಗೆ ನೋಂದಣಿ ಮಾಡಿ ತೇರ್ಗಡೆ ಹೊಂದಿರುತ್ತಾರೆ. ಆದರೆ ವಿಶ್ವವಿದ್ಯಾಲಯದ ಅನುಮತಿ ಇಲ್ಲದೇ ಮುಂದಿನ ಸೆಮಿಸ್ಟರ್‌ಗಳಿಗೆ ಪ್ರವೇಶ ಪಡೆದಿರುವ ಕಾರಣ, ಇಂತಹ ಅನೇಕ ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳನ್ನು ತಡೆಹಿಡಿಯಲಾಗಿರುತ್ತದೆ. ಇಂತಹ ವಿದ್ಯಾರ್ಥಿಗಳು ವಿಶ್ವವಿದ್ಯಾಲಯಕ್ಕೆ ಮನವಿಗಳನ್ನು ಸಲ್ಲಿಸಿ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳನ್ನು ಬಿಡುಗಡೆಗೊಳಿಸಲು ಪದೇ ಪದೇ ಮನವಿ ಮಾಡುತ್ತಿರುವುದನ್ನು ಮನಗಂಡು ದಿನಾಂಕ:21.04.2022ರಲ್ಲಿ ನಡೆದ ವಿದ್ಯಾವಿಷಯಕ ಪರಿಷತ್ತಿನ ಸಭೆಯಲ್ಲಿ ಅಂತಹ ವಿದ್ಯಾರ್ಥಿಗಳ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣಪತ್ರವನ್ನು ಬಿಡುಗಡೆಗೊಳಿಸಲು ನಿರ್ಣಯಿಸಿರುತ್ತದೆ.

ಅದರಂತೆ ಈ ಆದೇಶ ಹೊರಡಿಸಲಾಗಿದೆ.

**ವಿ.ಕಾ.ಶಾಖೆ-1/ಸ್ನಾತಕ ಕೋರ್ಸು/ಪ.ಪ್ರ.ಪ.ಬಿ/2021-22** **ದಿನಾಂಕ: 13.06.2022**

ದಿನಾಂಕ: 21.04.2022ರಂದು ನಡೆದ ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಿರ್ಣಯದನುಸಾರ, ಬೆಂಗಳೂರು ವಿಶ್ವವಿದ್ಯಾಲಯ ಸಂಯೋಜಿತ ಕಾಲೇಜುಗಳಲ್ಲಿ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶ ಪಡೆದು, ವ್ಯಾಸಂಗ ಮಧ್ಯದಲ್ಲಿಯೇ ಮೊಟಕುಗೊಳಿಸಿ ನಂತರ ವಿಶ್ವವಿದ್ಯಾಲಯದ ಅನುಮತಿ ಪಡೆಯದೇ ವಿವಿಧ ಸ್ನಾತಕ ಕೋರ್ಸುಗಳ ಮುಂದಿನ ತರಗತಿಗಳ ಪರೀಕ್ಷೆಗಳಿಗೆ ನೋಂದಾಯಿಸಿಕೊಂಡು, ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರುವ ಎಲ್ಲಾ ವಿದ್ಯಾರ್ಥಿಗಳ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳನ್ನು ಬಿಡುಗಡೆಗೊಳಿಸಲು ಮತ್ತು ಇಂತಹ ವಿದ್ಯಾರ್ಥಿಗಳು ಆಂತರಿಕ ಅಂಕಗಳು ವಿಶ್ವವಿದ್ಯಾಲಯಕ್ಕೆ ತಲುಪದೇ ಇದ್ದಲ್ಲಿ ಬಿಡುಗಡೆಗೊಳಿಸಲಾಗುವ ಸೆಮಿಸ್ಟರ್ ಫಲಿತಾಂಶದ ಅಂಕಪಟ್ಟಿಯನ್ನು ಅದರ ಹಿಂದಿನ ಅಥವಾ ಮುಂದಿನ ಸೆಮಿಸ್ಟರ್‌ಗಳ ಆಂತರಿಕ ಅಂಕಗಳ ಸರಾಸರಿ ಅಂಕಗಳನ್ನು ಪರಿಗಣನೆಗೆ ತೆಗೆದುಕೊಂಡು ಅಂಕಪಟ್ಟಿ ಬಿಡುಗಡೆ ಮಾಡಲು ಕುಲಸಚಿವರು (ಮೌಲ್ಯಮಾಪನ) ಇವರಿಗೆ ಅಧೀಕರಿಸಲಾಗಿದೆ.

ಆದೇಶಾನುಸಾರ

ಸಹಿ/-
ಕುಲಸಚಿವರು

ಗೆ,

1. **ಕುಲಸಚಿವರು (ಮೌಲ್ಯಮಾಪನ) ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು** -ದಿನಾಂಕ: 21.04.2022ರಂದು ನಡೆದ ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಿರ್ಣಯದನುಸಾರ ಕ್ರಮವಹಿಸಲು ತಿಳಿಸಲಾಗಿದೆ.

2. **ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕ ಕೋರ್ಸುಗಳ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ** - ಅಂತಹ ವಿದ್ಯಾರ್ಥಿಗಳ ಗಮನಕ್ಕೆ ತರಲು ಹಾಗೂ ಕುಲಸಚಿವರು (ಮೌಲ್ಯಮಾಪನ) ಬೆಂಗಳೂರು ವಿಶ್ವವಿದ್ಯಾಲಯ ಇವರಿಗೆ ದಾಖಲೆಗಳನ್ನು ಸಲ್ಲಿಸಲು ಸೂಚಿಸಲಾಗಿದೆ.

ಪ್ರತಿಗಳು:

1. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳು, ಕುಲಸಚಿವರು, ಕುಲಸಚಿವರು (ಮೌಲ್ಯಮಾಪನ), ಹಾಗೂ ಆಪ್ತ ಸಹಾಯಕರು, ವಿತ್ತಾಧಿಕಾರಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
2. ಕಛೇರಿ ಪ್ರತಿ.